# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 590(675) |
| ಸದಸ್ಯರ ಹೆಸರು | ಶ್ರೀ ಐವನ್ ಡಿ' ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 18-08-2025 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಗಳೂರು ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಬಹುಕಾಲದ ಬೇಡಿಕೆಯನ್ನು ಈಡೇರಿಸಲು ಕ್ರಮ ಕೈಗೊಳ್ಳುವುದೇ; ಈ ಬಗ್ಗೆ ಸರ್ಕಾರದ ಮುಂದಿರುವ ಪ್ರಸ್ತಾವನೆಯೇನು; (ವಿವರ ನೀಡುವುದು) | ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಬಲವರ್ಧನೆಗೊಳಿಸಲಾಗುತ್ತಿದೆ.<br><br>ಮಂಗಳೂರಿನಲ್ಲಿ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |
| (ಆ) | ಮಂಗಳೂರಿನಲ್ಲಿ ಇಂಜಿನಿಯರಿಂಗ್ ಕೋರ್ಸುಗಳಿಗೆ ಬಹುಬೇಡಿಕೆಯಿದ್ದು, ಪ್ರತಿಷ್ಠಿತ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಇರುವುದರಿಂದ ಅದರಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಂಡಲ್ಲಿ ಸಾವಿರಾರು ಬಡ ಮಕ್ಕಳಿಗೆ ಅನುಕೂಲವಾಗುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | |
| (ಇ) | ಮಂಗಳೂರು ನಗರದಲ್ಲಿ ಸರ್ಕಾರಿ ಪಾಲಿಟೆಕ್ನಿಕಲ್ ಕಾಲೇಜನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯಲ್ಲಿನ ಪಾಲಿಮರ್ ಕೆಮಿಕಲ್ ಮತ್ತು ಇಲೆಕ್ಟ್ರಾನಿಕ್ಸ್ ವಿಭಾಗದ ಕಟ್ಟಡ ದುರಸ್ಥಿ ಹಾಗೂ ಇತರೆ ನವೀಕರಣ ಕಾಮಗಾರಿಗೆ ಸಂಬಂಧಿಸಿದಂತೆ 2020-21 ನೇ ಸಾಲಿಗೆ ಅಂದಾಜು ಮೊತ್ತ ರೂ. 200.00 ಲಕ್ಷಗಳ ಕಾಮಗಾರಿಯನ್ನು ಮಂಜೂರು ಮಾಡಲಾಗಿದ್ದು ಪ್ರಸ್ತುತ ಕಾಮಗಾರಿಯು ಪೂರ್ಣಗೊಂಡು ಹಸ್ತಾಂತರಿಸಲಾಗಿರುತ್ತದೆ.<br><br>2020-21ನೇ ಸಾಲಿನ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ರೂ.300.00 ಲಕ್ಷಗಳ ಬಾಲಕರ ವಸತಿ ನಿಲಯ ಕಾಮಗಾರಿಯು ಮಂಜೂರುಗೊಂಡಿದ್ದು, ಪ್ರಸ್ತುತ ಕಾಮಗಾರಿಯು ಪೂರ್ಣಗೊಂಡು ಹಸ್ತಾಂತರಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಹೆಚ್‌ಪಿಟಿ 2022, ದಿ:14/07/2022 ರಂತೆ 2022-23ನೇ ಸಾಲಿನಿಂದ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗುವ ಸರ್ಕಾರಿ ಶುಲ್ಕಗಳನ್ನು ಸಂಸ್ಥೆಯಲ್ಲಿ ಉಳಿಸಿಕೊಂಡು ಗ್ರಂಥಾಲಯಕ್ಕೆ ಪುಸ್ತಕ ಖರೀದಿ ಹಾಗೂ ಸಂಬಂಧಪಟ್ಟ |

| | | |
|---|---|---|
| | | ವೆಚ್ಚಗಳು,ಪೀಠೋಪಕರಣ ಖರೀದಿ/ದುರಸ್ತಿ, ಪ್ರಯೋಗಾಲಯ ಉಪಕರಣ ಹಾಗೂ ದಿನಬಳಕೆ ಸಾಮಾಗ್ರಿಗಳ ಖರೀದಿ ಮತ್ತು ಇಂಟರ್ನೆಟ್ ಸೌಲಭ್ಯ ವೆಚ್ಚ ಭರಿಸಲು ಅನುಮತಿ ನೀಡಿರುವುದರಿಂದ ಸಂಸ್ಥೆಯಲ್ಲಿ ಸಂಗ್ರಹವಾಗುವ ಅನುದಾನದಲ್ಲಿ ಸಂಸ್ಥೆಗೆ ಅವಶ್ಯಕತೆ ಅನುಗುಣವಾಗಿ ಅಗತ್ಯವಿರುವ ಸಂಪನ್ಮೂಲಗಳನ್ನು ಒದಗಿಸಿಕೊಳ್ಳಲು ಕ್ರಮ ವಹಿಸಲಾಗಿದೆ.<br><br>ಅಲ್ಲದೇ ಸದರಿ ಸಂಸ್ಥೆಯ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ ಹಾಗೂ ಕಂಪ್ಯೂಟರ್ ಸೈನ್ಸ್ ವಿಭಾಗಗಳಿಗೆ ಅವಶ್ಯವಿರುವ ತರಗತಿ ಕೊಠಡಿ, ಪ್ರಯೋಗಾಲಯ ಕೊಠಡಿ, ಗ್ರಂಥಾಲಯ ಕಟ್ಟಡ ಹಾಗೂ ಉಪಹಾರಗೃಹ ನಿರ್ಮಾಣ ಮತ್ತು ಪಾಲಿಮರ್ ಮತು ಕೆಮಿಕಲ್ ವಿಭಾಗಗಳ ಕಟ್ಟಡದ ದುರಸ್ತಿ ಕಾಮಗಾರಿಗಳನ್ನು ಅಂದಾಜು ರೂ.1445.00 ಲಕ್ಷಗಳಲ್ಲಿ ಅನುದಾನದ ಲಭ್ಯತೆಯನುಸಾರ ಕೈಗೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. |
| (ಈ) | ಈ ಪಾಲಿಟೆಕ್ನಿಕ್ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿನಿಲಯವನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಪ್ರಸ್ತುತ ಎಷ್ಟು ವಿದ್ಯಾರ್ಥಿಗಳಿಗೆ ವಸತಿ ನಿಲಯದಲ್ಲಿ ಅವಕಾಶ ನೀಡಲಾಗಿದೆ ? (ವಿವರ ನೀಡುವುದು) | ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯಲ್ಲಿ 03 ಬಾಲಕರ ಹಾಗೂ 02 ಬಾಲಕಿಯರ ವಿದ್ಯಾರ್ಥಿನಿಲಯಗಳು ಇರುತ್ತವೆ.<br><br>ಉನ್ನತ ಶಿಕ್ಷಣ ಇಲಾಖೆಯಡಿ ಇರುವ ವಿದ್ಯಾರ್ಥಿನಿಲಯಗಳಲ್ಲಿ ಊಟೋಪಾಚಾರದ ವೆಚ್ಚ ಮತ್ತು ಇತರೆ ವೆಚ್ಚಗಳನ್ನು ವಿದ್ಯಾರ್ಥಿಗಳೇ ಭರಿಸಬೇಕಾಗಿರುವ ಕಾರಣ, ಸದರಿ ವಿದ್ಯಾರ್ಥಿನಿಲಯಗಳಿಗೆ ಹೆಚ್ಚಿನ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಇಚ್ಚಿಸುವುದಿಲ್ಲ.<br><br>ಹಿಂದುಳಿದ ವರ್ಗಗಳ ಕಲ್ಯಾಣ/ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಉಚಿತವಾಗಿ ಸೌಲಭ್ಯಗಳನ್ನು ಪಡೆಯಬಹುದಾಗಿದೆ.<br><br>ಆದ್ದರಿಂದ, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯಲ್ಲಿರುವ 03 ಬಾಲಕರ ಹಾಗೂ 02 ಬಾಲಕಿಯರ ವಿದ್ಯಾರ್ಥಿನಿಲಯಗಳ ಪೈಕಿ, 02 ಬಾಲಕರ ಹಾಗೂ 01 ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ. ಉಳಿದ 02 ವಿದ್ಯಾರ್ಥಿನಿಲಯಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |

ಕಡತ ಸಂಖ್ಯೆ: ಇಡಿ 126 ಹೆಚ್‌ಪಿಟಿ 2025

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು